# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 178 | Pages. 2 | Date: 24-06-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 178 - ಪುಟಗಳು : 2 | 24-06-2026 ಬುಧವಾರ | Ph: 8762954248 | ದರ : ₹1


# ತುರ್ತು ಪರಿಸ್ಥಿತಿ ಎದುರಿಸಲು ಆಡಳಿತ ಸನ್ನದ್ಧ

## ಆನೆಮಹಲ್‌ನಲ್ಲಿ ವಿಪತ್ತು ನಿರ್ವಹಣೆ ಅಣಕು ಪ್ರದರ್ಶನ । ಸ್ಥಳೀಯರಿಗೆ ಜಾಗೃತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪ್ರತಿಯೊಬ್ಬ ಮನುಷ್ಯನ ಜೀವವೂ ಅತ್ಯಮೂಲ್ಯ. ನೈಸರ್ಗಿಕ ವಿಕೋಪ ಅಥವಾ ಭೂಕುಸಿತದಂತಹ ತುರ್ತು ಸಂದರ್ಭಗಳಲ್ಲಿ ನಾವು ತಕ್ಷಣವೇ ಸ್ಪಂದಿಸುವುದರಿಂದ ಅಮೂಲ್ಯ ಜೀವಗಳನ್ನು ಉಳಿಸಬಹುದು. ಈ ನಿಟ್ಟಿನಲ್ಲಿ ತಾಲೂಕು ಆಡಳಿತವು ಯಾವುದೇ ವಿಪತ್ತನ್ನು ಎದುರಿಸಲು ಸಂಪೂರ್ಣವಾಗಿ ಸಜ್ಜಾಗಿದೆ ಎಂದು ಸಕಲೇಶಪುರ ಉಪವಿಭಾಗಾಧಿಕಾರಿ ಹುಲಮನೆ ತಿಮ್ಮಣ್ಣ ತಿಳಿಸಿದರು.

ಪಟ್ಟಣದ ಆನೆಮಹಲ್ ಪ್ರದೇಶದಲ್ಲಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ (ಎನ್‌ಡಿಆರ್‌ಎಫ್) ವತಿಯಿಂದ ಮಂಗಳವಾರ ಆಯೋಜಿಸಿದ್ದ ಭೂಕುಸಿತ ಜಾಗೃತಿ ಮತ್ತು ಅಣಕು ಪ್ರದರ್ಶನ (ಮಾಕ್ ಡ್ರಿಲ್) ಕಾರ್ಯಕ್ರಮದ ಬಳಿಕ ಅವರು ಮಾತನಾಡಿ, ಸಾರ್ವಜನಿಕರೇ ಮೊದಲ ರಕ್ಷಕರು.

ಭೂಕುಸಿತದಂತಹ ಘಟನೆಗಳು ಸಂಭವಿಸಿದಾಗ, ಹೊರಗಿನಿಂದ ರಕ್ಷಣಾ ತಂಡಗಳು ಬರುವವರೆಗೂ ಸ್ಥಳೀಯ ಸಾರ್ವಜನಿಕರೇ ಟಿಮೊದಲ ಪ್ರತಿಕ್ರಿಯೆ ನೀಡುವವರುಟಿ ಆಗಿರುತ್ತಾರೆ. ಹೀಗಾಗಿ, ಪ್ರತಿಯೊಬ್ಬ ನಾಗರಿಕನಿಗೂ ವಿಪತ್ತು ನಿರ್ವಹಣೆಯ ಕುರಿತು ಪ್ರಾಥಮಿಕ ಅರಿವಿರುವುದು ಅತ್ಯಗತ್ಯ ಎಂದು ಅಭಿಪ್ರಾಯಪಟ್ಟರು.

### ಇಲಾಖೆಗಳ ಸಮನ್ವಯಕ್ಕೆ ಒತ್ತು

ವಿಪತ್ತು ನಿರ್ವಹಣೆಯಲ್ಲಿ ಪ್ರತಿಯೊಂದು ಇಲಾಖೆಯ ಪಾತ್ರವೂ ನಿರ್ಣಾಯಕ. ಪೊಲೀಸ್, ಅಗ್ನಿಶಾಮಕ, ಆರೋಗ್ಯ, ಅರಣ್ಯ, ಸೆಸ್ಕ್ ಸೇರಿದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.



ಸಂಚಾರ ನಿಯಂತ್ರಿಸಿ ರಕ್ಷಣಾ ವಾಹನಗಳಿಗೆ ಸುಗಮ ಮಾರ್ಗ ಕಲ್ಪಿಸುವುದು ಪೊಲೀಸ್ ಇಲಾಖೆಯ ಜವಾಬ್ದಾರಿ. ಆರೋಗ್ಯ ಇಲಾಖೆಯು ಆಂಬುಲೆನ್ಸ್ ನೊಂದಿಗೆ ತರಬೇತಿ ಪಡೆದ ಸಿಬ್ಬಂದಿ ಸನ್ನದ್ಧರಾಗಿರಬೇಕು ಮತ್ತು ಗಾಯಾಳುಗಳನ್ನು ವೈಜ್ಞಾನಿಕವಾಗಿ ಸ್ಥಿರಗೊಳಿಸಿ ಆಸ್ಪತ್ರೆಗೆ ಸಾಗಿಸಬೇಕು ಎಂದು ಹೇಳಿದರು.

### ಅಣಕು ಪ್ರದರ್ಶನದಿಂದ ಜಾಗೃತಿ

ಎನ್‌ಡಿಆರ್‌ಎಫ್ ತಂಡದ ಅಧಿಕಾರಿ ಯಲ್ಲಪ್ಪ ಮಾತನಾಡಿ, ಬೆಂಗಳೂರಿನಿಂದ ರಕ್ಷಣಾ ತಂಡಗಳು ಸ್ಥಳಕ್ಕೆ ತಲುಪಲು ಕೆಲವು ಗಂಟೆಗಳ ಸಮಯ ಬೇಕಾಗಬಹುದು. ಆ ನಿರ್ಣಾಯಕ ಸಮಯದಲ್ಲಿ ಸ್ಥಳೀಯರ ಜ್ಞಾನವೇ ಜೀವ ರಕ್ಷಣೆಗೆ ಸಹಕಾರಿ. ಪ್ರಥಮ ಚಿಕಿತ್ಸೆ ಮತ್ತು ರಕ್ತಸ್ರಾವ ತಡೆಯುವ ವಿಧಾನಗಳ ಬಗ್ಗೆ ಜನರಿಗೆ ಅರಿವಿದ್ದರೆ ಅನಾಹುತದ ಪ್ರಮಾಣವನ್ನು ಗಣನೀಯವಾಗಿ ತಗ್ಗಿಸಬಹುದು ಎಂದು ತಿಳಿಸಿದರು.

ಈ ಅಣಕು ಪ್ರದರ್ಶನದಲ್ಲಿ ವಿದ್ಯುತ್ ಸಂಪರ್ಕ ಕಡಿತ, ಗಾಯಾಳುಗಳ ರಕ್ಷಣೆ, ತುರ್ತು ಚಿಕಿತ್ಸೆ ಮತ್ತು ಸಂಚಾರ ನಿರ್ವಹಣೆಯನ್ನು ಪ್ರಾಯೋಗಿಕವಾಗಿ ತೋರಿಸಲಾಯಿತು.

ಎನ್‌ಡಿಆರ್‌ಎಫ್ ತಂಡದ ಕಮಾಂಡೆಂಟ್ ಹಾಗೂ ಸಿಬ್ಬಂದಿಯ ಕಾರ್ಯವನ್ನು ಉಪವಿಭಾಗಾಧಿಕಾರಿಗಳು ಶ್ಲಾಘಿಸಿದರು.

ತಹಸೀಲ್ದಾರ್ ಸುಪ್ರಿತಾ, ಸರ್ಕಲ್ ಇನ್‌ಸ್ಪೆಕ್ಟರ್ ವನರಾಜ್, ವಲಯ ಅರಣ್ಯ ಅಧಿಕಾರಿ ಹೇಮಂತ್ ಕುಮಾರ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಗಂಗಾಧರ, ತಾಲೂಕು ವೈದ್ಯಾಧಿಕಾರಿ ಡಾ. ಮಹೇಶ್, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಎನ್‌ಡಿಆರ್‌ಎಫ್‌ನ ಸುನಿಲ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಆಲೂರಿನಲ್ಲಿ ಮಿತಿ ಮೀರಿದ ಅಕ್ರಮ ಮಣ್ಣು ಸಾಗಾಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ತಾಲೂಕಿನಲ್ಲಿ ರಾತ್ರೋ ರಾತ್ರಿ ಅಕ್ರಮವಾಗಿ ಮಣ್ಣು ಸಾಗಾಣಿಕೆ ಮಾಡುತ್ತಿದ್ದು ಸಂಪೂರ್ಣ ಕೆರೆಯ ಮಣ್ಣನ್ನೇ ಲೂಟಿ ಹೊಡೆದಿರುವ ಗಂಭೀರ ಆರೋಪ ಕೇಳಿಬಂದಿದೆ.

ತಾಲೂಕಿನ ಕಣತೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಕೊಡಗಿಹಳ್ಳಿ ಕೆರೆಯ ಮಣ್ಣನ್ನು ಖಾಲಿ ಮಾಡಲಾಗಿದೆ. ಜೆಸಿಬಿ ಸಹಾಯದಿಂದ ಟಿಪ್ಪರ್‌ಗಳನ್ನು ಬಳಸಿಕೊಂಡು ಹಗಲು- ರಾತ್ರಿಯೆನ್ನದೇ ಮಣ್ಣನ್ನು ಬಗೆದು ಸಾಗಿಸಲಾಗಿದೆ.

ಮನೆ ಕಟ್ಟುವವರು, ಕಾರ್ಖಾನೆ, ರಸ್ತೆ ಇತ್ಯಾದಿ ನಿರ್ಮಾಣ ಕಾಮಗಾರಿಗೆ ಮಣ್ಣಿನ ಅಗತ್ಯವಿದ್ದು, ಇದನ್ನೇ ಲೂಟಿಕೋರರು ಬಂಡವಾಳ ಮಾಡಿಕೊಂಡು ಕೃಷಿ ಚಟುವಟಿಕೆಗಳಿಗೆ ಬಳಸಬೇಕಾದ ಕೆರೆಯ ಮಣ್ಣನ್ನು ಲೂಟಿ ಮಾಡಿದ್ದಾರೆ.

ಹಿಟಾಚಿ, ಟಿಪ್ಪರ್ ಮೂಲಕ ಅಕ್ರಮವಾಗಿ ಮಣ್ಣು ಸಾಗಾಣಿಕೆ ಮಾಡಿ ದಿನನಿತ್ಯ ನಿರಂತರವಾಗಿ ಲಕ್ಷಾಂತರ ರೂ. ಬೆಲೆ ಬಾಳುವ ಸರಿ ಸುಮಾರು 1000 ಟನ್ ಮಣ್ಣು ದೋಚಿರುವುದು ಕಂಡುಬಂದಿದೆ.

ಕೆರೆಯ ಫಲವತ್ತಾದ ಮಣ್ಣು ದಂಧೆಕೋರರ ಪಾಲಾಗುತ್ತಿದೆ ಹಾಗೂ ಸ್ಥಳೀಯ ಪ್ರಭಾವಿಗಳ ಕುಮ್ಮಕ್ಕಿನಿಂದ ಮಾಫಿಯಾ ನಡೆಯುತ್ತಿದೆ ಎನ್ನಲಾಗಿದೆ. ಅದರಿಂದ ಅಪಾರ ಸಂಖ್ಯೆಯ ಮಣ್ಣು ಕಣ್ಮರೆಯಾಗುತ್ತಿವೆ.

ಆದಾಗ್ಯೂ ಸಂಬಂಧಪಟ್ಟ ತಹಸೀಲ್ದಾರ್, ಗ್ರಾಮ ಪಂಚಾಯಿತಿ ಅಧಿಕಾರಿಗಳು, ಪೊಲೀಸರಿಗೂ ಇಲಾಖೆಯ ಅಧಿಕಾರಿಗಳು ಕೂಡ ಕಂಡು ಕಾಣದಂತೆ ಜಾಣ ಕುರುಡುತನ ಪ್ರದರ್ಶಿಸುತ್ತಿದ್ದಾರೆ ಎಂಬ ಆರೋಪ ಸಾರ್ವಜನಿಕರಿಂದ ಕೇಳಿಬಂದಿದೆ.



### ಸರ್ಕಾರದ ನಿಯಮ ಉಲ್ಲಂಘನೆ

ಸರ್ಕಾರದ ನಿಯಮದ ಪ್ರಕಾರ ಕೃಷಿಗೆ ಯೋಗ್ಯವಲ್ಲದ ಗುಡ್ಡ ಪ್ರದೇಶ ಹಾಗೂ ಸರ್ಕಾರಿ ಜಮೀನಿನಲ್ಲಿ ಮಣ್ಣು ತೆಗೆಯಲು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಅನುಮತಿ ಪಡೆದು, ಇಲಾಖೆ ನಿಗದಿಪಡಿಸುವ ರಾಯಲ್ಟಿ ಪಾವತಿಸಿ ಗಣಿಗಾರಿಕೆ ನಡೆಸಬೇಕು. ಆದರೆ, ಮಣ್ಣು ದಂಧೆ ಕೋರರು ಪ್ರಭಾವಿಗಳು ಹಾಗೂ ಅಧಿಕಾರಿಗಳ ಬೆಂಬಲದಿಂದ ಕೆರೆಯಲ್ಲಿ ಹತ್ತಾರು ಅಡಿ ಆಳದವರೆಗೂ ಗಣಿಗಾರಿಕೆ ನಡೆಸುತ್ತಾ ಸರ್ಕಾರಕ್ಕೆ ಬರಬೇಕಾದ ರಾಯಲ್ಟಿಗೂ ಕತ್ತರಿ ಹಾಕುತ್ತಿದ್ದಾರೆ.

ಕಳೆದ ರಾತ್ರಿ ಇದೇ ವಿಚಾರವಾಗಿ ಗಾಂಜಾ ಅಮಲಿನಲ್ಲಿ ಜೋರು ಗಲಾಟೆ ನಡೆದಿದೆ. ಟಿಪ್ಪರ್‌ನಿಂದ ಕಾರಿಗೆ ಗುದ್ದಿ ಚಾಲಕನ ಮೇಲೆ ಹಲ್ಲೆ ನಡೆಸಿರುವ ಘಟನೆ ನಡೆದಿದೆ.

# ಜೀತಪದ್ಧತಿ-ಮಾನವ ಕಳ್ಳ ಸಾಗಣೆ ದೊಡ್ಡ ಪಿಡುಗು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಧುನಿಕ ಸಮಾಜ ವೇಗವಾಗಿ ಅಭಿವೃದ್ಧಿ ಹೊಂದುತ್ತಿದ್ದರೂ, ಜೀತ ಕಾರ್ಮಿಕ ಪದ್ಧತಿ ಮತ್ತು ಮಾನವ ಕಳ್ಳಸಾಗಣೆ ಎಂಬ ಅಮಾನವೀಯ ಪಿಡುಗು ಇನ್ನೂ ಸಂಪೂರ್ಣವಾಗಿ ನಿರ್ಮೂಲನೆಯಾಗಿಲ್ಲ ಎಂದು ವಿಕಸನ ಸಂಸ್ಥೆ ಮುಖ್ಯಸ್ಥ ವರ್ಗಿಸ್ ಬೇಸರ ವ್ಯಕ್ತಪಡಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಜೀತ ಕಾರ್ಮಿಕ ಪದ್ಧತಿ ಮತ್ತು ಮಾನವ ಕಳ್ಳಸಾಗಣೆ ಕುರಿತು ಪತ್ರಕರ್ತರಿಗಾಗಿ ಹಮ್ಮಿಕೊಂಡಿದ್ದ ಮಾಹಿತಿ ಕಾರ್ಯಾಗಾರದಲ್ಲಿ ಮಾತನಾಡಿ, ಬಡತನ, ಅನಕ್ಷರತೆ, ಸಾಮಾಜಿಕ ಅಸಮಾನತೆ ಮತ್ತು ಸಾಲದ ಬಾಧೆಗಳಿಂದ ಅನೇಕರು ಶೋಷಣೆಯ ಬಲೆಗೆ ಸಿಲುಕುತ್ತಿದ್ದು, ಅಂಥವರನ್ನು ರಕ್ಷಿಸಿ ಸ್ವಾಭಿಮಾನದ ಬದುಕಿನತ್ತ ಕೊಂಡೊಯ್ಯುವ ಕಾರ್ಯವನ್ನು ವಿಕಸನ ಸಂಸ್ಥೆ ನಿರಂತರವಾಗಿ ಮಾಡುತ್ತಿದೆ ಎಂದರು.




ಹಾಸನ ಜೊತೆಗೆ ಚಿಕ್ಕಮಗಳೂರು, ಮೈಸೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿಯೂ ವಿವಿಧ ಜಾಗೃತಿ ಕಾರ್ಯಕ್ರಮ, ಕಾನೂನು ನೆರವು ಶಿಬಿರ, ಪುನರ್ವಸತಿ ಯೋಜನೆ ಹಾಗೂ ಸಾಮಾಜಿಕ ಹಕ್ಕು ಕುರಿತು ಅರಿವು ಮೂಡಿಸುವ ಕಾರ್ಯ ನಡೆಸುತ್ತಿದೆ ಎಂದರು.

ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಿಭಾ ವರ್ಗಿಸ್ ಮಾತನಾಡಿ, ಮಾನವ ಕಳ್ಳಸಾಗಣೆ ಕುರಿತು ಸಮಾಜದಲ್ಲಿ ಹಲವಾರು ತಪ್ಪು ಕಲ್ಪನೆಗಳಿವೆ. ಮಾನವ ಕಳ್ಳಸಾಗಣೆ ಎಂದರೆ ಕೇವಲ ಮಹಿಳೆಯರು ಅಥವಾ ಮಕ್ಕಳನ್ನು ಲೈಂಗಿಕ ಶೋಷಣೆಗೆ ಬಳಸಿಕೊಳ್ಳುವುದಷ್ಟೇ ಅಲ್ಲ. ಪುರುಷರು, ಮಹಿಳೆಯರು ಮತ್ತು ಮಕ್ಕಳನ್ನು ಬಲವಂತದ ದುಡಿಮೆ, ಭಿಕ್ಷಾಟನೆ, ಗೃಹಕಾರ್ಯ, ಕಾರ್ಖಾನೆ ಕೆಲಸ, ಕೃಷಿ ಚಟುವಟಿಕೆ ಸೇರಿ ವಿವಿಧ ಶೋಷಣೆಗೆ ಬಳಸಿಕೊಳ್ಳುವುದೂ ಮಾನವ ಕಳ್ಳಸಾಗಣೆ ವ್ಯಾಪ್ತಿಗೆ ಬರುತ್ತದೆ ಎಂದು ತಿಳಿಸಿದರು. ಈ ಕೃತ್ಯ ತಡೆಯಲು ಸಮಾಜದ ಪ್ರತಿಯೊಬ್ಬರೂ ಜಾಗೃತರಾಗಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಜೀತ ಕಾರ್ಮಿಕ ಪದ್ಧತಿಯಿಂದ ವಿಮುಕ್ತರಾದ ಮೂರ್ತಿ ತಮ್ಮ ಬದುಕಿನ ಅನುಭವ ಹಂಚಿಕೊಂಡು ಭಾವುಕರಾದರು.

ಕಾರ್ಯಾಗಾರದಲ್ಲಿ ಪತ್ರಕರ್ತರಿಗೆ ಪ್ರೊಜೆಕ್ಟರ್ ಮೂಲಕ ಜೀತ ಕಾರ್ಮಿಕ ಪದ್ಧತಿ, ಮಾನವ ಕಳ್ಳಸಾಗಣೆ ವಿಧಾನಗಳು, ಕಾನೂನು ಕ್ರಮಗಳು, ಬಾಧಿತರ ರಕ್ಷಣೆ ಮತ್ತು ಪುನರ್ವಸತಿ ಪ್ರಕ್ರಿಯೆ ಕುರಿತು ಸಮಗ್ರ ಮಾಹಿತಿ ನೀಡಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಕೆ.ಎಂ.ಹರೀಶ್, ಖಜಾಂಚಿ ಪ್ರಕಾಶ್ ಬೆಳವಾಡಿ, ವಿಕಸನ ಸಂಸ್ಥೆಯ ಯೇಸುದಾಸ್, ಚನ್ನಬಸವೇಶ್ವರ, ಆರ್.ಜಿ. ಗಿರೀಶ್ ಇದ್ದರು.

# ಕಲ್ಲು ಗಣಿಗಾರಿಕೆಗೆ ಸುಖಾ ಸುಮ್ಮನೆ ಅಡ್ಡಿ: ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭೋವಿ ಸಮಾಜದ ಆರ್ಥಿಕ ಸ್ವಾವಲಂಬನೆ ಮತ್ತು ಕಾರ್ಮಿಕರ ಬದುಕಿಗೆ ಆಧಾರವಾಗಿರುವ ಕಲ್ಲು ಗಣಿಗಾರಿಕೆ ಚಟುವಟಿಕೆಗಳನ್ನು ಉದ್ದೇಶಪೂರ್ವಕವಾಗಿ ಸ್ಥಗಿತಗೊಳಿಸಲು ಕೆಲವರು ಪ್ರಯತ್ನಿಸುತ್ತಿದ್ದಾರೆ ಎಂದು ಅಖಿಲ ಕರ್ನಾಟಕ ಭೋವಿ ಮಹಾಸಭಾದ ರಾಜ್ಯಾಧ್ಯಕ್ಷ ಹೆಚ್. ಮಂಜಪ್ಪ ಎಚ್ಚರಿಸಿದರು.




ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಆಲೂರು ತಾಲೂಕಿನ ಮಗ್ಗೆ ಗ್ರಾಮದ ಸರ್ವೆ ನಂ.151ರಲ್ಲಿರುವ ಮೂರು ಎಕರೆ ಸರ್ಕಾರಿ ಗೋಮಾಳ ಜಾಗದಲ್ಲಿ ಭೋವಿ ಸಂಘಕ್ಕೆ ಕಾನೂನು ಬದ್ಧವಾಗಿ ಕಲ್ಲು ಗಣಿಗುತ್ತಿಗೆ ಮಂಜೂರಾಗಿದೆ. ಆದರೆ ಹೊಸಮತ ಗ್ರಾಮದ ಕೆಲವರು ಆರಂಭದಿಂದಲೂ ಅಡ್ಡಿಪಡಿಸುವ ಉದ್ದೇಶದಿಂದ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ದೂರಿದರು.

ಗಣಿಗಾರಿಕೆಗೆ ಸ್ಫೋಟಕ ಬಳಕೆಯಿಂದ ಬೆಳೆ ಹಾನಿ, ಭಾರಿ ವಾಹನಗಳ ಓಡಾಟದಿಂದ ರೈತರಿಗೆ ತೊಂದರೆ, ಕಾಡು ಪ್ರಾಣಿಗಳ ವಾಸಸ್ಥಾನಕ್ಕೆ ಹಾನಿ ಹಾಗೂ ಮೂಲ ಸೌಕರ್ಯ ಹಾಳು ಇತ್ಯಾದಿ ಎಂಬ ಆರೋಪ ಮುಂದಿಟ್ಟು ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೇಲೆ ಒತ್ತಡ ಹೇರಿದ್ದರು. ಪರಿಣಾಮ ಒಂದೂವರೆ ವರ್ಷ ಗಣಿಗಾರಿಕೆ ಚಟುವಟಿಕೆ ಸ್ಥಗಿತಗೊಂಡು ನೂರಾರು ಕಾರ್ಮಿಕರ ಜೀವನ ಸಂಕಷ್ಟಕ್ಕೆ ಸಿಲುಕಿತ್ತು. ಇದರ ವಿರುದ್ಧ ಭೋವಿ ಸಮಾಜದ ಸದಸ್ಯರು ಡಿಸಿ ಕಚೇರಿ ಎದುರು 15 ದಿನ ಕಾಲ ಅಹೋರಾತ್ರಿ ಧರಣಿ ಹಾಗೂ ಸತ್ಯಾಗ್ರಹ ನಡೆಸಿದ ನಂತರ ಡಿಸಿ ಅವರು ಉನ್ನತ ಮಟ್ಟದ ಜಂಟಿ ಸ್ಥಳ ತನಿಖಾ ಸಮಿತಿ ರಚಿಸಿ ಪರಿಶೀಲಿಸಿದ ನಂತರ ಗಣಿಗಾರಿಕೆ ಪುನಾರಂಭಕ್ಕೆ ಅನುಮತಿ ನೀಡಿದರು.

ಆದರೂ ಕೆಲವರು ವಿರೋಧ ಚಟುವಟಿಕೆ ನಿಲ್ಲಿಸಿಲ್ಲ. ಕೋರೆಯಲ್ಲಿ ಯಾರೂ ಇಲ್ಲದ ಸಮಯದಲ್ಲಿ ನಿರುಪಯುಕ್ತ ಸ್ಫೋಟಕ ಸಾಮಗ್ರಿ ತಂದು ಬಂಡೆಗಳ ಮೇಲೆ ಎಸೆದು, ಅಕ್ರಮವಾಗಿ ಸ್ಫೋಟಿಸಲಾಗಿದೆ ಎಂದು ದೂರು ನೀಡುತ್ತಾರೆ ಎಂದರು.

ಅಲ್ಲದೆ ಅಕ್ರಮವಾಗಿ ಗಣಿಗಾರಿಕೆ ಪ್ರದೇಶಕ್ಕೆ ಪ್ರವೇಶಿಸಿ ಕಾರ್ಮಿಕರನ್ನು ಬೆದರಿಸುವುದು, ವಾಹನಗಳ ಸಂಚಾರಕ್ಕೆ ಅಡ್ಡಿಪಡಿಸುವುದು, ಕೆಲಸ ಸ್ಥಗಿತಗೊಳಿಸಲು ಒತ್ತಡ ಹೇರಿ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಈ ರೀತಿಯ ಕಿರುಕುಳ ನಿಲ್ಲದೇ ಇದ್ದರೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದಲಿತ ದೌರ್ಜನ್ಯ ತಡೆ ಕಾಯ್ದೆಯಡಿ ಕ್ರಮ ಕೈಗೊಳ್ಳುವಂತೆ ದೂರು ಸಲ್ಲಿಸಲಾಗುವುದು. ನಮ್ಮ ಮೇಲಿನ ಕಿರುಕುಳ ಮತ್ತು ಅವಮಾನಕಾರಿ ವರ್ತನೆಗಳನ್ನು ಗಂಭೀರವಾಗಿ ಪರಿಗಣಿಸಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಭೋವಿ ಸಮಾಜದ ಜಿಲ್ಲಾಧ್ಯಕ್ಷ ಸಂದೀಪ್, ಭೋವಿ ಕಲ್ಲು ಕುಟಿಕರ ಸಂಘದ ಅಧ್ಯಕ್ಷ ಮಂಜೇಶ್, ಕಾರ್ಮಿಕ ಮುಖಂಡರಾದ ಮಹದೇವ್, ನಾಗರಾಜು, ಚಿನ್ನಸ್ವಾಮಿ ಇದ್ದರು.

# ಮನುಷ್ಯನು ಕನ್ನಡಿಯಂತೆ ನಮ್ಮ ನಡತೆಯ ಪ್ರತಿಬಿಂಬ

ಕನ್ನಡಿಯ ಮುಂದೆ ನಿಂತಾಗ ನಮ್ಮ ಮುಖ ಹೇಗಿದೆಯೋ ಹಾಗೆಯೇ ಅದು ಪ್ರತಿಬಿಂಬಿಸುತ್ತದೆ. ಅದೇ ರೀತಿ ಮನುಷ್ಯನೂ ಒಂದು ಕನ್ನಡಿಯಂತೆಯೇ ವರ್ತಿಸುತ್ತಾನೆ. ನಾವು ಇತರರೊಂದಿಗೆ ಹೇಗೆ ನಡೆದುಕೊಳ್ಳುತ್ತೇವೆಯೋ, ಅದೇ ರೀತಿಯ ಪ್ರತಿಕ್ರಿಯೆ ಸಮಾಜದಿಂದ ನಮಗೆ ಮರಳಿ ಸಿಗುತ್ತದೆ. ಆದ್ದರಿಂದ ಮನುಷ್ಯನು ಕನ್ನಡಿಯಂತೆ ಎಂಬ ಮಾತು ಜೀವನದ ಒಂದು ಮಹತ್ವದ ಸತ್ಯವನ್ನು ತಿಳಿಸುತ್ತದೆ. ನಾವು ಒಬ್ಬರನ್ನು ಪ್ರೀತಿಯಿಂದ, ಗೌರವದಿಂದ ಮಾತನಾಡಿಸಿದರೆ ಅವರು ಸಹ ಅದೇ ಪ್ರೀತಿ ಮತ್ತು ಗೌರವವನ್ನು ತೋರಿಸುತ್ತಾರೆ. ಆದರೆ ನಾವು ಕೋಪದಿಂದ, ಅಹಂಕಾರದಿಂದ ವರ್ತಿಸಿದರೆ ಅದೇ ರೀತಿಯ ಪ್ರತಿಕ್ರಿಯೆ ನಮ್ಮತ್ತ ಮರಳುತ್ತದೆ. ಉದಾಹರಣೆಗೆ ಶಾಲೆಯಲ್ಲಿ ಶಿಕ್ಷಕರು ವಿದ್ಯಾರ್ಥಿಗಳನ್ನು ಸ್ನೇಹದಿಂದ ಮಾರ್ಗದರ್ಶನ ಮಾಡಿದಾಗ ವಿದ್ಯಾರ್ಥಿಗಳು ಅವರನ್ನು ಗೌರವಿಸುತ್ತಾರೆ. ಹಾಗೆಯೇ ಮನೆಯಲ್ಲಿಯೂ ಪೋಷಕರು ಮಕ್ಕಳಿಗೆ ಉತ್ತಮ ಮೌಲ್ಯಗಳನ್ನು ತೋರಿಸಿದರೆ ಮಕ್ಕಳು ಅದನ್ನೇ ಅನುಸರಿಸುತ್ತಾರೆ. ಮಹಾತ್ಮ ಗಾಂಧೀಜಿ ಅವರು ತಮ್ಮ ಜೀವನದ ಮೂಲಕ ಅಹಿಂಸೆ, ಸತ್ಯ ಮತ್ತು ಪ್ರೀತಿಯ ಸಂದೇಶವನ್ನು ಜಗತ್ತಿಗೆ ನೀಡಿದರು. ಅದರ ಫಲವಾಗಿ ಲಕ್ಷಾಂತರ ಜನರು ಅವರ ಆದರ್ಶಗಳನ್ನು ಅನುಸರಿಸಿದರು. ಇದು ಮನುಷ್ಯನು ಕನ್ನಡಿಯಂತೆ ವರ್ತಿಸುವುದಕ್ಕೆ ಅತ್ಯುತ್ತಮ ಉದಾಹರಣೆಯಾಗಿದೆ.

ಇಂದಿನ ವೇಗದ ಯುಗದಲ್ಲಿ ಮಾನವ ಸಂಬಂಧಗಳು ದುರ್ಬಲವಾಗುತ್ತಿರುವ ಸಂದರ್ಭದಲ್ಲಿ ಈ ಸಂದೇಶ ಇನ್ನಷ್ಟು ಪ್ರಸ್ತುತವಾಗಿದೆ.

ನಾವು ಇತರರಲ್ಲಿ ಕಾಣಬೇಕೆಂದು ಬಯಸುವ ಗುಣಗಳನ್ನು ಮೊದಲು ನಮ್ಮಲ್ಲೇ ಬೆಳೆಸಿಕೊಳ್ಳಬೇಕು. ಏಕೆಂದರೆ ಸಮಾಜವು ನಮ್ಮ ನಡತೆಯ ಪ್ರತಿಬಿಂಬವೇ ಆಗಿದೆ. ಆದ್ದರಿಂದ ಒಳ್ಳೆಯ ಮಾತು, ಸೌಜನ್ಯ, ಪ್ರೀತಿ ಮತ್ತು ಸಹಾನುಭೂತಿಯನ್ನು ನಮ್ಮ ಜೀವನದ ಭಾಗವಾಗಿಸೋಣ. ಆಗ ನಮ್ಮ ಸುತ್ತಲಿನ ಜಗತ್ತು ಸಹ ಅದೇ ಸೌಂದರ್ಯವನ್ನು ಪ್ರತಿಬಿಂಬಿಸುವ ಕನ್ನಡಿಯಾಗುತ್ತದೆ. ನಾವು ಬದಲಾದರೆ ಜಗತ್ತೂ ಬದಲಾಗುತ್ತದೆ.



- ಅಂತೋಣಿ ಮುತ್ತು ವಿ.
ಶಿಕ್ಷಕರು
ಮೊ.ನಂ. 7259675543

# ಆತ್ಮಹತ್ಯೆಗೆ ಯತ್ನಿಸಿದ ಯುವಕ: ಆಸ್ಪತ್ರೆಗೆ ದಾಖಲು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಯಾವ ತಪ್ಪು ಮಾಡದಿದ್ದರೂ ಅಬಕಾರಿ ಪೊಲೀಸರು ತನ್ನ ವಿರುದ್ಧ ಎಫ್‌ಐಆರ್ ದಾಖಲಿಸಿ ಜೈಲಿಗೆ ಕಳುಹಿಸಲು ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿ ಸಕಲೇಶಪುರದ ಯುವಕ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾನೆ.

ತಾಲ್ಲೂಕಿನ ನಾರ್ವೆ ಹೊಸಳ್ಳಿ ಗ್ರಾಮದ ಅಜಯ್‌ಕುಮಾರ್ ಆತ್ಮಹತ್ಯೆಗೆ ಯತ್ನಿಸಿದ ಯುವಕ.

ಕಳೆದ ಆರು ತಿಂಗಳಿನಿಂದ ಪಟ್ಟಣದ ಹಳೇಸಂತವೇರಿ ಬಡಾವಣೆಯ ಶನಿದೇವರ ದೇವಸ್ಥಾನ ಹಿಂಭಾಗ ಬಾಡಿಗೆ ಮನೆಯಲ್ಲಿ ವಾಸವಿರುವ ಈತ ಮೆಡಿಕಲ್ ರೆಪ್ರೆಸೆಂಟೇಟಿವ್ ಆಗಿ ಕೆಲಸ ಮಾಡುತ್ತಿದ್ದಾನೆ. ಸೋಮವಾರ ಮಧ್ಯಾಹ್ನ ಮನೆಯಲ್ಲಿ ವಿಷ ಸೇವಿಸಿದ್ದ. ಮನೆ ಮಾಲೀಕರು ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿ ಆತನನ್ನು ಆಸ್ಪತ್ರೆಗೆ ದಾಖಲಿಸಿದರು.



ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ಅಜಯ್ ಕುಮಾರ್ ಸುದ್ದಿಗಾರರೊಂದಿಗೆ ಮಾತನಾಡಿ, ಗಾಂಜಾ ಪೆಡ್ಲರ್ ರವಿ ಎಂಬಾತನ ಮಾತು ಕೇಳಿ ಅಬಕಾರಿ ಪೊಲೀಸರು ನನ್ನ ವಿರುದ್ಧ ಹಗೆತನ ಸಾಧಿಸುತ್ತಿದ್ದಾರೆ. ಎರಡು ಬಾರಿ ಪೊಲೀಸರು ಮನೆಗೆ ಬಂದು ಪರಿಶೀಲಿಸಿದರೂ ಗಾಂಜಾ ಅಥವಾ ಯಾವುದೇ ಮಾದಕ ವಸ್ತುಗಳು ಪತ್ತೆಯಾಗಿಲ್ಲ. ವೈದ್ಯಕೀಯ ಪರೀಕ್ಷೆಯಲ್ಲಿಯೂ ನಾನು ಗಾಂಜಾ ಸೇವನೆ ಮಾಡಿಲ್ಲ ಎಂಬುದು ದೃಢಪಟ್ಟಿದೆ. ಆದರೂ ಅಬಕಾರಿ ಇಲಾಖೆಯ ಅಧಿಕಾರಿಗಳು ಕಠಿಣ ಪ್ರಕರಣ ದಾಖಲಿಸಿ ಜೈಲಿಗೆ ಕಳುಹಿಸುವುದಾಗಿ ಬೆದರಿಕೆ ಹಾಕಿ 10 ಸಾವಿರ ರೂ. ಪಡೆದಿದ್ದಾರೆಂದು ಆರೋಪಿಸಿದರು.

# ಬಾತ್‌ರೂಂ ಕಿಟಕಿಯಿಂದ ಬಂದು ಕಳ್ಳತನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚನ್ನರಾಯಪಟ್ಟಣ ಗ್ರಾಮಾಂತರ ಹಾಗೂ ಅರಸೀಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ಪ್ರಕರಣಗಳಲ್ಲಿ 20 ಗ್ರಾಂ ತೂಕದ ಚಿನ್ನಾಭರಣ ಮತ್ತು 56 ಸಾವಿರ ರೂ. ಕಳವು ಮಾಡಲಾಗಿದೆ.

ಮನೆಯ ಬಾತ್‌ರೂಮ್ ಕಿಟಕಿಯಿಂದ ಒಳನುಗ್ಗಿರುವ ಕಳ್ಳರು ಚಿನ್ನಾಭರಣ ಮತ್ತು ನಗದು ಎಗರಿಸಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕು ಬರಗೂರು ಹ್ಯಾಂಡ್‌ಪೋಸ್ಟ್‌ನಲ್ಲಿ ನಡೆದಿದೆ. ಗ್ರಾಮದ ಮಧು ಅವರು ಜೂ. 19 ರಂದು ಮನೆಗೆ ಬೀಗ ಹಾಕಿ ಕುಟುಂಬ ಸಮೇತ ಸಂಬಂಧಿಕರ ಮನೆಯ ಮದುವೆ ಹಿನ್ನೆಲೆಯಲ್ಲಿ ಸೋಮವಾರಪೇಟೆಗೆ ತೆರಳಿದ್ದರು. ಜೂ. 22ರಂದು ವಾಪಾಸ್ ಬಂದು ನೋಡಿದಾಗ ಕಿಟಕಿ ಮುರಿದಿರುವುದು ಗೊತ್ತಾಗಿದೆ.

ಬೆಡ್ ರೂಂನ ಬೀರುವಿನ ಲಾಕರ್‌ನಲ್ಲಿಟ್ಟಿದ್ದ 6 ಗ್ರಾಂ ತೂಕದ 3 ಜೊತೆ ಚಿನ್ನದ ಓಲೆ, 4 ಗ್ರಾಂನ 2 ಉಂಗುರ, 10 ಗ್ರಾಂ ತೂಕದ ಒಂದು ಚಿನ್ನದ ಚೈನ್ ಹಾಗೂ 56 ಸಾವಿರ ರೂ. ನಗದು ಕದ್ದಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಮನೆ ಬಾಗಿಲು ಮುರಿದು 6 ಸಾವಿರ ರೂ. ಮೊತ್ತದ ಬೆಳ್ಳಿ ಬಟ್ಟಲು ಕದ್ದಿರುವ ಘಟನೆ ಅರಸೀಕೆರೆಯ ಹೆಂಜಗೊಂಡನಹಳ್ಳಿಯಲ್ಲಿ ನಡೆದಿದೆ.

ಕೃಷ್ಣಮೂರ್ತಿ ಎಂಬುವವರು ಜೂ. 22ರ ಸಂಜೆ 5.45ರ ಸಮಯದಲ್ಲಿ ಮನೆಗೆ ಬೀಗ ಹಾಕಿ ತಮ್ಮ ಹೆಂಡತಿಯೊಂದಿಗೆ ಸ್ನೇಹಿತರ ಮನೆಗೆ ತೆರಳಿದ್ದರು. ಕೆಲ ಸಮಯದ ಬಳಿಕ ವಾಪಾಸ್ ಬಂದಾಗ ಮನೆ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟಿದ್ದ ನಾಲ್ಕು ಬೆಳ್ಳಿ ಬಟ್ಟಲು ಕದ್ದಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಂಬೇಡ್ಕರ್ ಪುತ್ಥಳಿ ಅನಾವರಣಕ್ಕೆ ಆಗ್ರಹಿಸಿ ಧರಣಿ

ಚನ್ನರಾಯಪಟ್ಟಣ: ತಾಲ್ಲೂಕು ಕಚೇರಿ ಆವರಣದಲ್ಲಿ ಅಂಬೇಡ್ಕರ್ ಪುತ್ಥಳಿ ನಿರ್ಮಾಣವಾಗಿ ಎಂಟು ತಿಂಗಳು ಕಳೆದರೂ ಅನಾವರಣ ಮಾಡದೆ ಇರುವುದನ್ನು ಖಂಡಿಸಿ ಪುರಸಭೆ ನಾಮನಿರ್ದೇಶಿತ ಮಾಜಿ ಸದಸ್ಯ ನಂಜುಂಡ ಮೈಮ್ ಮಂಗಳವಾರ ಏಕಾಂಗಿ ಪ್ರತಿಭಟನೆ ನಡೆಸಿದರು.



ಪ್ರತಿಮೆ ಎದುರು ಬಾಯಿಗೆ ಕಪ್ಪು ಬಟ್ಟೆ ಧರಿಸಿ ಮೌನ ಪ್ರತಿಭಟನೆ ನಡೆಸಿದ ಅವರು ನಂತರ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು. ಸಂವಿಧಾನದ ಮೂಲಕ ದೇಶದ ಪ್ರತಿಯೊಬ್ಬರಿಗೂ ಸ್ವಾಭಿಮಾನದ ಬದುಕು ಕಲ್ಪಿಸಿಕೊಟ್ಟ ಅಂಬೇಡ್ಕರ್ ಅವರನ್ನು ಎಲ್ಲರೂ ಸ್ಮರಿಸುತ್ತೇವೆ. ಗೌರವಾರ್ಥವಾಗಿ ಪಟ್ಟಣದಲ್ಲಿ ಪ್ರತಿಮೆ ಸ್ಥಾಪಿಸಲಾಗಿದೆ. ಕಾಮಗಾರಿ ಮುಗಿದು ಎಂಟು ತಿಂಗಳು ಕಳೆದರೂ ಲೋಕಾರ್ಪಣೆ ಮಾಡಿಲ್ಲ. ಈ ವಿಳಂಬಕ್ಕೆ ಕಾರಣ ಏನೆಂಬುದು ಅರ್ಥವಾಗುತ್ತಿಲ್ಲ ಎಂದರು.

ಶೀಘ್ರದಲ್ಲೇ ಅಂಬೇಡ್ಕರ್ ಪ್ರತಿಮೆ ಉದ್ಘಾಟಿಸದಿದ್ದರೆ ಮುಂದಿನ ದಿನಗಳಲ್ಲಿ ವಿವಿಧ ಸಂಘಟನೆಗಳೊಂದಿಗೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದರು.

# ಜೂ. 27-28ಕ್ಕೆ ರಾಜ್ಯ ಮಟ್ಟದ ಅಧ್ಯಯನ ವರ್ಗ

ಹಾಸನ: ಅಖಿಲ ಭಾರತೀಯ ಸಾಹಿತ್ಯ ಪರಿಷದ್ ವತಿಯಿಂದ ಜೂ. 27 ಮತ್ತು 28 ರಂದು ನಗರದ ತಣ್ಣೀರುಹಳ್ಳ ಮಠದಲ್ಲಿ ರಾಜ್ಯ ಮಟ್ಟದ ಆನಂದ ಮಠ (ಬಂಕಿಮ ಚಂದ್ರ ಚಟ್ಟೋಪಾಧ್ಯಾಯರ ಐತಿಹಾಸಿಕ ಕಾದಂಬರಿ) ಅಧ್ಯಯನ ವರ್ಗ ಹಮ್ಮಿಕೊಳ್ಳಲಾಗಿದೆ. 27ರ ಶನಿವಾರ ಮಧ್ಯಾಹ್ನ 2 ಗಂಟೆಗೆ ಉದ್ಘಾಟನಾ ನೆರವೇರಲಿದ್ದು, ಜೂ. 28ರ ಭಾನುವಾರ ಮಧ್ಯಾಹ್ನ 3 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ. ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವವರು ಮೊ.ನಂ. 9448719579 ಇಲ್ಲಿಗೆ ಸಂಪರ್ಕಿಸಬಹುದು ಎಂದು ಅ.ಭಾ.ಸಾ.ಪ. ಜಿಲ್ಲಾ ಕಾರ್ಯದರ್ಶಿ ನೇ.ರಾ.ಪ್ರಶಾಂತ್ ತಿಳಿಸಿದ್ದಾರೆ.

# ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ

## ರಾಜಕೀಯ ಪಕ್ಷಗಳು ಏಜೆಂಟರ ನೇಮಿಸಲಿ | ಜಿಲ್ಲಾಧಿಕಾರಿ ಲತಾಕುಮಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರತಿ ಬೂತ್‌ಗಳಿಗೂ ರಾಜಕೀಯ ಪಕ್ಷಗಳು ತಮ್ಮ ಏಜೆಂಟ್‌ರನ್ನು ನೇಮಕ ಮಾಡಬೇಕು. ಅದರಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಹಕಾರಿ ಆಗುವುದರ ಜೊತೆಗೆ ಪಾರದರ್ಶಕವಾಗಿ ಪ್ರಕ್ರಿಯೆ ನಡೆಸಲು ಅನುಕೂಲವಾಗುತ್ತದೆ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದರು.



ನಗರದ ಹಾಸನಾಂಬ ಕಲಾಭವನದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕುರಿತು ಹಾಸನ ವಿಧಾನ ಸಭಾ ಕ್ಷೇತ್ರದ ಚುನಾಯಿತ ಜನಪ್ರತಿನಿಧಿಗಳು, ಮೇಲ್ವಿಚಾರಕರು, ಮತಗಟ್ಟೆ ಅಧಿಕಾರಿಗಳು ಹಾಗೂ ಮತಗಟ್ಟೆ ಏಜೆಂಟ್‌ರಿಗೆ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮತಗಟ್ಟೆ ಅಧಿಕಾರಿಗಳು ಜೂ.30 ರಿಂದ ಜುಲೈ29ರ ವರೆಗೆ ಮನೆ ಮನೆಗೆ ಭೇಟಿ ನೀಡಿ ಪೂರ್ವದಲ್ಲಿ ಮುದ್ರಣಗೊಂಡಿರುವ ನಮೂನೆಯನ್ನು ದ್ವಿ ಪ್ರತಿಯಲ್ಲಿ ನೀಡುತ್ತಾರೆ. ಮತದಾರರು ಅದನ್ನು ಸಂಪೂರ್ಣವಾಗಿ ಭರ್ತಿ ಮಾಡಿ ಪ್ರಸ್ತುತ ಭಾವಚಿತ್ರ ಅಂಟಿಸಿ ಕಡ್ಡಾಯವಾಗಿ ಸಹಿ ಮಾಡಿ ಒಂದು ಪ್ರತಿಯನ್ನು ಮತಗಟ್ಟೆ ಅಧಿಕಾರಿಗೆ ಹಿಂದಿರುಗಿಸಬೇಕು ಎಂದರು.

ಪ್ರಜಾ ಪ್ರಾತಿನಿಧಿ ಕಾಯ್ದೆ ಅಡಿಯಲ್ಲಿ ಮತದಾರರ ಪಟ್ಟಿ ತಯಾರಿಸುವುದು ಸಂವಿಧಾನಾತ್ಮಕ ಕರ್ತವ್ಯ. ಈ ನಿಟ್ಟಿನಲ್ಲಿ ದೇಶದಾದ್ಯಂತ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮವು ನಡೆಯುತ್ತಿದ್ದು, 2025ರ ಮತದಾರರ ಪಟ್ಟಿಯಲ್ಲಿರುವ ಹೆಸರುಗಳಿಗೆ ಸಂಬಂಧಿಸಿ 2002ರಲ್ಲಿರುವ ಮತದಾರರ ಪಟ್ಟಿಯ ಮತದಾರರ ಕುಟುಂಬದ ಸಂತತಿಗಳಿಗೆ ಮ್ಯಾಪಿಂಗ್ ಮಾಡಿ ಲಿಂಕ್ ಮಾಡಲಾಗುತ್ತಿರುವುದರಿಂದ ಯಾವ ಪ್ರಜೆಯು ಮತದಾನದಿಂದ ವಂಚಿತರಾಗದಂತೆ ಗಮನಹರಿಸಬೇಕು ಎಂದು ತಿಳಿಸಿದರು.

ಈಗಾಗಲೇ 16 ರಾಜ್ಯಗಳಲ್ಲಿ ಹಾಗೂ ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಮುಗಿದಿದೆ. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಉಳಿದ ರಾಜ್ಯಗಳಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದೆ. ಅದರಂತೆ ರಾಜ್ಯದಲ್ಲಿಯು ನಡೆಯುತ್ತಿದೆ.

ಜಿಲ್ಲೆಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ಜಿಲ್ಲಾ ಚುನಾವಣಾಧಿಕಾರಿಯವರ ಪಾತ್ರ ಬಹುಮುಖ್ಯ ವಾಗಿರುತ್ತದೆ. ಈ ನಿಟ್ಟಿನಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಗಳಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಮಾಸ್ಟರ್ ಟ್ರೈನರ್‌ಗಳು ಸರಿಯಾಗಿ ಅರ್ಥ ಮಾಡಿಕೊಂಡು ಮತಗಟ್ಟೆ ಅಧಿಕಾರಿಗಳಿಗೆ ಯಾವುದೇ ಗೊಂದಲವಿಲ್ಲದಂತೆ ಪರಿಣಾಮಕಾರಿಯಾಗಿ ತರಬೇತಿ ನೀಡಲು ಕ್ರಮವಹಿಸಿ ಎಂದು ತಿಳಿಸಿದರು.

8 ರಿಂದ 10 ಮತಗಟ್ಟೆ ಅಧಿಕಾರಿಗಳು ಒಬ್ಬ ಮೇಲ್ವಿಚಾರಕರು ನೋಡಬೇಕಾಗುತ್ತದೆ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಕುರಿತು ಗಂಭೀರವಾಗಿ ಪರಿಗಣಿಸಿ ಮೇಲ್ವಿಚಾರಕರು ತಮ್ಮ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು.

ಮತದಾರರ ಪಟ್ಟಿಯಿಂದ ಅರ್ಹ ಮತದಾರರು ಹೊರಗುಳಿಯದಂತೆ ನಿಗಾವಹಿಸಬೇಕು ಅಧಿಕಾರಿಗಳಿಗೆ ಸೂಚನೆ ನೀಡಿದರು. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಹಾಸನ ಜಿಲ್ಲೆಯು ಶೇ.98 ರಷ್ಟು ಮ್ಯಾಪಿಂಗ್ ಆಗಿರುವುದು ಜಿಲ್ಲೆಗೆ ಹೆಮ್ಮೆ ತರುವಂತಹ ವಿಷಯವಾಗಿದೆ. ಉಳಿದ ಶೇ. 2ರಷ್ಟು ಕೆಲಸವನ್ನು ಅತ್ಯುತ್ತಮವಾಗಿ ನಿರ್ವಹಿಸಿ ಜಿಲ್ಲೆಗೆ ಉತ್ತಮ ಹೆಸರನ್ನು ತರುವಂತೆ ತಿಳಿಸಿದರು.

ಕರಡು ಮತದಾರರ ಪಟ್ಟಿಯನ್ನು 5-8-2026 ರಂದು ಪ್ರಕಟಿಸಲಾಗುತ್ತದೆ, ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು 5-8-2026 ರಿಂದ 4-9-2026ರ ವರೆಗೆ, ಹಕ್ಕು ಮತ್ತು ಆಕ್ಷೇಪಣೆಗಳ ತಿರುವಳಿ 5-8-2026 ರಿಂದ 3-10-2026 ರವರೆಗೆ, ಅಂತಿಮ ಮತದಾರರ ಪಟ್ಟಿಯನ್ನು 7-10-2026 ರಂದು ಪ್ರಕಟಣೆ ಮಾಡಲಾಗುತ್ತದೆ ಎಂದು ತಿಳಿಸಿದರು.

ವರ್ಷದಲ್ಲಿ ನಾಲ್ಕು ಬಾರಿ ಜನವರಿ, ಏಪ್ರಿಲ್, ಜುಲೈ ಮತ್ತು ಅಕ್ಟೋಬರ್ 1 ರಂದು ಮತದಾರರ ಪಟ್ಟಿ ಪರಿಷ್ಕರಣೆ ಆಗುತ್ತದೆ. ಆ ಸಂದರ್ಭದಲ್ಲಿ 18 ವರ್ಷ ಪೂರೈಸಿದವರು ಹೊಸ ಅರ್ಜಿ ಸಲ್ಲಿಸಬಹುದಾಗಿದೆ ಪ್ರಸ್ತುತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯಾಗಿ ಹೊಸ ಮತದಾರರ ಪಟ್ಟಿ ತಯಾರಿಸಲಾಗುತ್ತದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಮಹಾನಗರ ಪಾಲಿಕೆ ಆಯುಕ್ತ ಆರ್. ಕೃಷ್ಣಮೂರ್ತಿ, ತಹಸೀಲ್ದಾರ್ ಗೀತಾ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಗಿರೀಶ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಕೆಂಪೇಗೌಡ ಜಯಂತಿ: ಪೂರ್ವಭಾವಿ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಾಡಪ್ರಭು ಕೆಂಪೇಗೌಡರ ಜಯಂತಿ ಯಶಸ್ಸಿಗೆ ಎಲ್ಲರ ಸಹಕಾರ ಬೇಕು ಎಂದು ಶಾಸಕ ಹೆಚ್.ಪಿ.ಸ್ವರೂಪ್ ಕೋರಿದರು.



ನಗರದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ನಡೆದ ಕೆಂಪೇಗೌಡ ಜಯಂತಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಜೂ. 27ರಂದು ಅದ್ದೂರಿ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೂರು ಕಲಾತಂಡಗಳನ್ನು ನೀಡುವುದಾಗಿ ಹೇಳಿದೆ. ಕಾರ್ಯಕ್ರಮಕ್ಕೆ ಶಾಲಾ ಕಾಲೇಜು ಮಕ್ಕಳನ್ನು ಕರೆತರದೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತಾಗಬೇಕು ಎಂದರು.

ಸ್ವಸ್ಥ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಎಲ್ಲಾ ಮಹನೀಯರನ್ನು ಗೌರವಿಸಬೇಕು. ಅದರಲ್ಲೂ ನಮ್ಮ ಸಮುದಾಯದ ಮೇರು ವ್ಯಕ್ತಿಯ ಜಯಂತಿಯನ್ನು ಇನ್ನಷ್ಟು ಅರ್ಥಪೂರ್ಣವಾಗಿ ಆಚರಿಸಬೇಕೆಂಬ ಆಸೆ ನನಗಿದೆ.

ನಗರ ಸಾರಿಗೆ ಬಸ್ ನಿಲ್ದಾಣ ಮುಂಭಾಗ ಕೆಂಪೇಗೌಡರ ಪುತ್ಥಳಿ ಅನಾವರಣಕ್ಕೆ ನಿರ್ಧರಿಸಲಾಗಿದೆ. ಶ್ರೀ ಶಂಭುನಾಥ ಸ್ವಾಮೀಜಿ ಅವರ ಮಾರ್ಗದರ್ಶನದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಒಂದು ಸಮಿತಿ ರಚಿಸಿ ಮುಂದಿನ ಕೆಲಸ ಕೈಗೊಳ್ಳಲಾಗುವುದು. ಪುತ್ಥಳಿ ನಿರ್ಮಾಣಕ್ಕೆ ಈಗಾಗಲೇ ಮುಂಗಡ ಹಣ ಪಾವತಿಸಲಾಗಿದೆ. ಮುಂದಿನ ವರ್ಷದ ಜಯಂತಿ ವೇಳೆಗೆ ಪುತ್ಥಳಿ ಅನಾವರಣ ಮಾಡುವ ಉದ್ದೇಶವಿದೆ ಎಂದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಒಕ್ಕಲಿಗರ ಸಂಘದ ಜಿಲ್ಲಾಧ್ಯಕ್ಷ ಜಿ.ಎಲ್. ಮುದ್ದೇಗೌಡ, ರಾಜ್ಯ ಸಂಘದ ನಿರ್ದೇಶಕ ರಘು ಸುಮುಖ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕ ತಾರಾನಾಥ್ ಮತ್ತಿತರರಿದ್ದರು.

# ಸುಂಡೇನಹಳ್ಳಿಯಲ್ಲಿ 4 ಟಗರು, 2 ಮೇಕೆ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮನೆ ಸಮೀಪದ ಕೊಟ್ಟಿಗೆಯಲ್ಲಿ ಕಟ್ಟಿ ಹಾಕಿದ್ದ 4 ಟಗರು, 2 ಮೇಕೆ ಹಾಗೂ 3 ಹೋತಗಳನ್ನು ರಾತ್ರೋ ರಾತ್ರಿ ಕಳವು ಮಾಡಿರುವ ಘಟನೆ ತಾಲ್ಲೂಕಿನ ಸುಂಡೇನಹಳ್ಳಿಯಲ್ಲಿ ನಡೆದಿದೆ.

ಗ್ರಾಮದ ಗೀತಾ ಎಂಬುವವರು ಜೂ. 20ರ ಸಂಜೆ 7 ಗಂಟೆಗೆ ಮನೆ ಪಕ್ಕದ ಕೊಟ್ಟಿಗೆಯಲ್ಲಿ 4 ಟಗರು, 2 ಮೇಕೆ ಮತ್ತು 3 ಹೋತಗಳನ್ನು ಹಾಕಿ, ದನಗಳನ್ನು ಕಟ್ಟಿಹಾಕಿ ಬೀಗ ಹಾಕಿಕೊಂಡು ಹೋಗಿದ್ದರು. ಮಾರನೇ ದಿನ ಬೆಳಿಗ್ಗೆ ದನಗಳನ್ನು ಹೊರಗೆ ಕಟ್ಟಲೆಂದು ಬಂದಾಗ ಬಾಗಿಲಿನ ಚಿಲಕ ಮುರಿದಿರುವುದು ಗೊತ್ತಾಗಿದೆ. ತಕ್ಷಣವೇ ಪರಿಶೀಲಿಸಿದಾಗ ಸಾಕು ಪ್ರಾಣಿಗಳು ನಾಪತ್ತೆಯಾಗಿದ್ದವು.

ಎಲ್ಲಾ ಕಡೆ ಹುಡುಕಿದರೂ ಪತ್ತೆಯಾಗಿಲ್ಲ. ಕಳುವಾಗಿರುವ ಪ್ರಾಣಿಗಳ ಒಟ್ಟು ಮೌಲ್ಯ 1.45 ಲಕ್ಷ ರೂ. ಆಗಿದೆ. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಅಭಾದಿತ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಗೃಹಲಕ್ಷ್ಮಿ ಯೋಜನೆ ಸೇರಿ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಪಂಚ ಗ್ಯಾರಂಟಿಗಳು ಅಭಾದಿತವಾಗಿ ಮುಂದುವರಿಯುತ್ತದೆ ಎಂದು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಗೀಜಿಹಳ್ಳಿ ಧರ್ಮಶೇಖರ್ ಹೇಳಿದರು.

ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಪರಿಶೀಲನ ಸಭೆಯಲ್ಲಿ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆ ಕುರಿತು ವಿರೋಧ ಪಕ್ಷದವರು ಅಪಪ್ರಚಾರ ಮಾಡುತ್ತಿದ್ದಾರೆ. ಫಲಾನುಭವಿ ಮಹಿಳೆಯರು ಆತಂಕ ಪಡುವ ಅಗತ್ಯವಿಲ್ಲ. ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯಲಿದೆ. ಯಾರಿಗೂ ಅನುಮಾನ ಬೇಡ ಎಂದು ಭರವಸೆ ನೀಡಿದರು.

ಸಭೆಯಲ್ಲಿ ಗೃಹ ಲಕ್ಷ್ಮಿ, ಯುವನಿಧಿ, ಶಕ್ತಿ ಯೋಜನೆ, ಗೃಹಜೋತಿ ಹಾಗೂ ಅನ್ನಭಾಗ್ಯ ಯೋಜನೆ ಅನುಷ್ಠಾನ ಕುರಿತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಇಲಾಖೆವಾರು ತಾವು ಸಾಧಿಸಿರುವ ಪ್ರಗತಿಯನ್ನು ಪರಿಶೀಲನ ಸಭೆಯ ಗಮನಕ್ಕೆ ತಂದರು.

ಗ್ರಾಮೀಣ ಭಾಗದ ಪದವೀಧರ ವಿದ್ಯಾರ್ಥಿಗಳು ಮಾಹಿತಿ ಕೊರತೆಯಿಂದಾಗಿ ಯುವ ನಿಧಿ ಯೋಜನೆ ಪ್ರಯೋಜನ ಪಡೆಯಲು ಸಾಧ್ಯವಾಗುತ್ತಿಲ್ಲ. ಈ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ತಿಳುವಳಿಕೆ ಫಲಕಗಳನ್ನು ಹಾಕುವ ಮೂಲಕ ಯುವ ನಿಧಿ ಯೋಜನೆ ನಿರುದ್ಯೋಗಿ ಯುವಕರಿಗೆ ದೊರಕಿಸಿ ಕೊಡುವಂತೆ ಉದ್ಯೋಗ ವಿನಿಮಯ ಅಧಿಕಾರಿ ಪುರುಷೋತ್ತಮ್ ಅವರಿಗೆ ಅನುಷ್ಠಾನ ಸಮಿತಿ ಸದಸ್ಯ ಜಾಜೂರು ಸಿದ್ದೇಶ್ ಸಲಹೆ ನೀಡಿದರು.

ನಗರದಲ್ಲಿ ಸಾರಿಗೆ ಇಲಾಖೆಯ ನೂತನ ಬಸ್ ನಿಲ್ದಾಣ ಕಾಮಗಾರಿ ಪ್ರಗತಿಯಲ್ಲಿದ್ದು ತಾತ್ಕಾಲಿಕವಾಗಿ ಸ್ಥಳಾಂತರ ಗೊಂಡಿರುವ ಬಸ್ ನಿಲ್ದಾಣದ ಆವರಣದಲ್ಲಿ ಪ್ರಯಾಣಿಕರಿಗೆ ತೊಂದರೆ ಆಗದ ರೀತಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಹಾಗೂ ಹಳೆಯ ಬಸ್ ನಿಲ್ದಾಣದ ಬಳಿ ರಾಜ್ಯ ಸಾರಿಗೆ ಸಂಸ್ಥೆಯ ಎಲ್ಲಾ ಬಸ್ಸು ಗಳು ಕಡ್ಡಾಯವಾಗಿ ನಿಂತು ಪ್ರಯಾಣಿಕರನ್ನ ಹತ್ತಿಸಿಕೊಳ್ಳುವ ಹಾಗೂ ಇಳಿಸುವ ನಿಟ್ಟಿನಲ್ಲಿ ಚಾಲಕರು ಹಾಗೂ ನಿರ್ವಾಹಕರಿಗೆ ಖಡಕ್ ಸೂಚನೆ ನೀಡುವಂತೆ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಧರ್ಮಶೇಖರ್ ಖಡಕ್ ಸೂಚನೆ ನೀಡಿದರು.

ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಗಂಗಣ್ಣ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಸದಸ್ಯರಾದ ಪುರುಷೋತ್ತಮ್, ಪ್ರದೀಪ್, ಕಮಲಮ್ಮ, ಕಾಂತರಾಜ್ ಮತ್ತಿತರರಿದ್ದರು.

# ಜೂ. 27ಕ್ಕೆ 6ನೇ ಜಿಲ್ಲಾ ಮಟ್ಟದ ಯೋಗಾಸನ ಸ್ಪರ್ಧೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಶ್ವ ಯೋಗ ದಿನಾಚರಣೆ ಅಂಗವಾಗಿ ಜಿಲ್ಲಾ ಯೋಗ ಸಂಸ್ಥೆಯಿಂದ ಜೂ.27 ರಂದು ನಗರದ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಮಟ್ಟದ ಯೋಗಾಸನ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಸಂಸ್ಥೆ ಪ್ರಧಾನ ಕಾರ್ಯದರ್ಶಿ ಜೆ.ಐ.ನಿರಂಜನರಾಜ್ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಬೆಳಿಗ್ಗೆ 8 ರಿಂದ ಸ್ಪರ್ಧೆ ನಡೆಯಲಿದೆ. 8-12 ವರ್ಷದ ಬಾಲಕ-ಬಾಲಕಿಯರು, 12-15 ವರ್ಷ, 15-17 ವರ್ಷ, 17-20 ವರ್ಷದೊಳಗಿನ ಬಾಲಕ-ಬಾಲಕಿಯರು, 20-30 ವರ್ಷದ ಪುರುಷ-ಮಹಿಳೆಯರು, 30-40 ವರ್ಷ ಹಾಗು 40 ವರ್ಷ ಮೇಲ್ಪಟ್ಟ ಪುರುಷ ಹಾಗು ಮಹಿಳೆಯರು ಭಾಗಿಯಾಗಬಹುದು ಎಂದರು.

ಪಶ್ಚಿಮೋಸ್ತಾನಸನ, ವೃಕ್ಷಾಸನ, ಗಡುಡಾಸನ, ಮರೀಚಾಸನ, ಪರಿವೃತ್ತ ತ್ರಿಕೋನಾಸನ, ಪೂರ್ವೋತಾನಸನ, ಅರ್ಕರ್ಣ ಧನುರಾಸನ ಮತ್ತು ಊರ್ದ್ವ ಧನುರಾಸನ ಇರಲಿದೆ.

ಮೇಲೆ ಸೂಚಿಸಿರುವ ಆಸನಗಳಲ್ಲಿ 3 ಆಸನಗಳನ್ನು ಲಾಟರಿ ಮೂಲಕ ಕಡ್ಡಾಯವಾಗಿ ಮಾಡುವುದು ನಂತರ ತಮಗೆ ಇಷ್ಟವಿರುವ 2 ಆಸನ ಸೇರಿ ಒಟ್ಟು 5 ಆಸನ ಮಾಡಬೇಕು. ಹೆಚ್ಚಿನ ವಿವರಗಳಿಗೆ ಪ್ರತಿದಿನ ಸಂಜೆ 4 ರಿಂದ 5 ಗಂಟೆ ವರೆಗೆ ನಗರದ ಮಹಾರಾಜ ಪಾರ್ಕ್‌ನಲ್ಲಿರುವ ಹೆಲ್ತ್ ಜಿಮ್‌ನಲ್ಲಿ ಜೆ.ಐ. ನಿರಂಜನ್ ರಾಜ್-9900839475, ಕೃಷ್ಣಪ್ಪ ವಿ.9448006300, ಮನೋಹರ್-7892886735 ಇಲ್ಲಿಗೆ ಸಂಪರ್ಕಿಸಬಹುದು ಎಂದರು.

ಸುದ್ದಿಗೋಷ್ಠಿಯಲ್ಲಿ ಗಣೇಶ್, ಭಾನುಮತಿ, ಮಹೋಹರ್, ನಾಗರಾಜ್ ಇದ್ದರು.

# ಜೂ. 28ಕ್ಕೆ ಚುಟುಕು ಸಾಹಿತ್ಯ ಸಮ್ಮೇಳನ: ಸರ್ವಾಧ್ಯಕ್ಷರಿಗೆ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಎ.ವಿ. ಕಾಂತಮ್ಮ ಮಹಿಳಾ ಕಾಲೇಜಿನ ಹಾರನಹಳ್ಳಿ ರಾಮಸ್ವಾಮಿ ಸುಶೀಲಮ್ಮ ಸಭಾಂಗಣದಲ್ಲಿ ಜೂ. 28ರ ಭಾನುವಾರ ನಡೆಯಲಿರುವ ಚೊಚ್ಚಲ ಚುಟುಕು ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆ ಚುಟುಕುಸಿರಿ ಡಾ. ರತ್ನ ಹಾಲಪ್ಪಗೌಡ ಅವರನ್ನು ಆತ್ಮೀಯವಾಗಿ ಆಹ್ವಾನಿಸಲಾಯಿತು.



ಅಧ್ಯಕ್ಷತೆ ವಹಿಸಿದ್ದ ಡಾ. ಎಂ.ಜಿ.ಆರ್. ಅರಸು ಮಾತನಾಡಿ, ಚುಟುಕು ಸಾಹಿತ್ಯ ಪರಿಷತ್ತು ರಾಜ್ಯದೆಲ್ಲೆಡೆ ಕೆಲಸ ಮಾಡುತ್ತಿದೆ. ಚುಟುಕು ಸಾಹಿತ್ಯದ ಏಳಿಗೆಗೆ ಶ್ರಮಿಸುತ್ತಿದೆ. ಯುವಜನರು, ವಿದ್ಯಾರ್ಥಿಗಳು ಚುಟುಕು ಸಾಹಿತ್ಯದ ಕಡೆ ಒಲವು ತೋರುತ್ತಿದ್ದಾರೆ. ಚುಟುಕು ಸಾಹಿತ್ಯ ಕೇವಲ ಕನ್ನಡ ಭಾಷೆಯಲ್ಲಿ ಮಾತ್ರವಲ್ಲ ಪ್ರಪಂಚದ ಎಲ್ಲಾ ಭಾಷೆಗಳಲ್ಲಿಯೂ ಕೂಡ ರಚಿತವಾಗುವಂತಹ ಉತ್ತಮ ಸಾಹಿತ್ಯ ಪ್ರಕಾರವಾಗಿದೆ ಎಂದರು.

ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾನಂ ಲೋಕೇಶ್ ಮಾತನಾಡಿ, ಚುಟುಕು ಸಾಹಿತ್ಯ ಇಂದಿನ ಕಾಲದ್ದಲ್ಲ. ಪ್ರಾಚೀನ ಇತಿಹಾಸವನ್ನು ಹೊಂದಿರುವಂತಹ ಇಂತಹ ಸಾಹಿತ್ಯವನ್ನು ಪ್ರಚುರಪಡಿಸುವಂತಹ ಕೈಂಕರ್ಯ ಕಾರ್ಯವನ್ನು ನಾವು ಮಾಡುತ್ತಿದ್ದೇವೆ. ಚುಟುಕು ಸಾಹಿತಿಗಳ ಮುಖವಾಣಿಯಾದ ಕೌಸ್ತುಭ ಪತ್ರಿಕೆಯ ಪ್ರಧಾನ ಸಂಪಾದಕರಾದ ಡಾ. ರತ್ನ ಹಾಲಪ್ಪಗೌಡ ಅವರನ್ನು ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಇವರು ಸಾಹಿತ್ಯ ಕ್ಷೇತ್ರದಲ್ಲಿ ಸಾಮಾಜಿಕ ಕ್ಷೇತ್ರದಲ್ಲಿ ಹಾಗೂ ಧಾರ್ಮಿಕ ಕ್ಷೇತ್ರದಲ್ಲಿ ಬಹಳಷ್ಟು ಕೆಲಸವನ್ನು ಮಾಡಿರುತ್ತಾರೆ. ಇವರ ಈ ಎಲ್ಲಾ ಸೇವೆಯನ್ನು ಪರಿಗಣಿಸಿ ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪ್ರಪ್ರಥಮ ಸಾಹಿತ್ಯ ಸಮ್ಮೇಳನಕ್ಕೆ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಸಮ್ಮೇಳನದ ಉದ್ಘಾಟನೆಯನ್ನು ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್ ನೆರವೇರಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಮೂರು ಗೋಷ್ಠಿಗಳು ಹಾಗೂ ಬಹುಭಾಷಾ ಕವಿಗೋಷ್ಠಿ ಏರ್ಪಡಿಸಲಾಗಿದೆ.

ಈ ಬಹುಭಾಷಾ ಕವಿಗೋಷ್ಠಿಯಲ್ಲಿ ಸುಮಾರು 10 ಭಾಷೆಗಳಲ್ಲಿ ಚುಟುಕುಗಳನ್ನು ವಾಚಿಸಲಿದ್ದಾರೆ. ಇದೊಂದು ದಾಖಲಾರ್ಹವಾದ ವಿಚಾರ ಎಂದು ತಿಳಿಸಿದರು.

ಡಾ. ಆದರ್ಶ, ಪ್ರೇಮ ಮಂಜುನಾಥ್, ಕಿರಣಕುಮಾರ್, ಮಲ್ಲೇಶ್, ಪೂರ್ಣಿಮಾ ನಾಗೇಂದ್ರ, ಗಿರಿಜಾ ನಿರ್ವಾಣಿ, ಮೋಹನ್ ತುಮಕೂರು, ಮಂಜುಳಾ, ನಟರಾಜ್ ಮೈಸೂರ್, ಹೇಮಾ ಲೋಕೇಶ್ ಇನ್ನಿತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್-24

1717: ಲಂಡನ್‌ನಲ್ಲಿ ಮೊದಲ ಆಧುನಿಕ ಫ್ರೀಮೇಸನ್ ಗ್ರ್ಯಾಂಡ್ ಲಾಡ್ಜ್ ಸ್ಥಾಪನೆಯಾಯಿತು.

1812: ಫ್ರಾನ್ಸ್‌ನ ಚಕ್ರವರ್ತಿ ನಪೋಲಿಯನ್ ಬೊನಪಾರ್ಟ್ ರಷ್ಯಾ ಮೇಲೆ ದಾಳಿ ಆರಂಭಿಸಿದರು. ಇದು ನಂತರದ ಫ್ರೆಂಚ್ ಆಕ್ರಮಣ ರಷ್ಯಾ (1812) ಯುದ್ಧಕ್ಕೆ ಕಾರಣವಾಯಿತು.

1932: ಥೈಲ್ಯಾಂಡ್‌ನ್‌ಲ್ಲಿ ರಕ್ತರಹಿತ ಕ್ರಾಂತಿ ನಡೆದು, ಸಂಪೂರ್ಣ ರಾಜಪ್ರಭುತ್ವದ ಅಂತ್ಯವಾಗಿ ಸಂವಿಧಾನಾತ್ಮಕ ರಾಜಪ್ರಭುತ್ವ ಸ್ಥಾಪನೆಯಾಯಿತು.

1948: ಬರ್ಲಿನ್ ನಿರ್ಬಂಧ ಆರಂಭವಾಯಿತು. ಇದು ಶೀತಲ ಸಮರದ ಪ್ರಮುಖ ಘಟನೆಯಾಗಿತ್ತು.

1983: ಭಾರತದ ಮೊದಲ ಮಹಿಳಾ ಪ್ರಧಾನಮಂತ್ರಿ ಇಂದಿರಾ ಗಾಂಧಿ ಅವರಿಗೆ ಲೆನಿನ್ ಶಾಂತಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

### ಜನನ

1987: ಲಯನಲ್ ಮೆಸ್ಸಿ, ಅರ್ಜೆಂಟೀನಾ ಫುಟ್‌ಬಾಲ್ ಆಟಗಾರ

### ನಿಧನ

1908: ಗ್ರೋವರ್ ಕ್ಲೀವ್‌ಲ್ಯಾಂಡ್, ಅಮೆರಿಕದ ಮಾಜಿ ಅಧ್ಯಕ್ಷ

2010: ವೀರೇಂದ್ರ ಪಾಟೀಲ್, ಕರ್ನಾಟಕದ ಮಾಜಿ ಮುಖ್ಯಮಂತ್ರಿ

# ಮರು ಪರಿಷ್ಕರಣೆ ನೆಪದಲ್ಲಿ ಗ್ಯಾರಂಟಿಗೆ ಕತ್ತರಿ ಹಾಕುವ ಹುನ್ನಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪಂಚ ಗ್ಯಾರಂಟಿ ಆಮಿಷವೊಡ್ಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್, ಕಳೆದ ಮೂರು ವರ್ಷಗಳಿಂದಲೂ ಅದೇ ಜಪ ಮಾಡುವ ಮೂಲಕ ಜಿಲ್ಲೆ ಸೇರಿದಂತೆ ಸಮಸ್ತ ನಾಡಿನ ಅಭಿವೃದ್ಧಿಯನ್ನು ಸಂಪೂರ್ಣ ಕಡೆಗಣಿಸಿದೆ ಎಂದು ಜಿಲ್ಲಾ ಜೆಡಿಎಸ್ ವಕ್ತಾರ ರಘು ಹೊಂಗೆರೆ ಆರೋಪಿಸಿದ್ದಾರೆ.

ಮರು ಪರಿಷ್ಕರಣೆ ಹೆಸರಿನಲ್ಲಿ ಕೆಲವು ಗ್ಯಾರಂಟಿಗಳಿಗೆ ಕತ್ತರಿ ಹಾಕಲು ಹೊರಟಿರುವುದು ಕಾಂಗ್ರೆಸ್ ಸರ್ಕಾರದ ಹೊಣೆಗೇಡಿತನಕ್ಕೆ ಹಿಡಿದ ಕನ್ನಡಿ. ಇದರಿಂದ ಜನಸಾಮಾನ್ಯರ ನೆಮ್ಮದಿಗೆ ಭಂಗ ಉಂಟಾಗಿದೆ. ಆರಂಭದಲ್ಲಿ ಮಂಕುಬೂದಿ ಎರಚಿ ಅಮಾಯಕ ಜನರನ್ನು ಮರುಳು ಮಾಡಿದ ಸರ್ಕಾರ, ಇದೀಗ ಅದೇ ಜನರನ್ನು ಬರಿಗೈ ಮಾಡಲು ಹೊರಟಿದೆ ಎಂದು ವಿಷಾದಿಸಿದ್ದಾರೆ.



ಗ್ಯಾರಂಟಿ ಯೋಜನೆಯಡಿ ಲೋಪವಾಗಿದ್ದರೆ ಅದಕ್ಕೆ ಜನರು ಅಥವಾ ಫಲಾನುಭವಿಗಳು ಕಾರಣ ಅಲ್ಲ, ಬದಲಾಗಿ ಸರ್ಕಾರ ವಾರ್ಷಿಕವಾಗಿ ಬರೋಬ್ಬರಿ ಆರೂವರೆ ಕೋಟಿ ರೂ.ಸಂಬಳ ಕೊಟ್ಟು ಇಟ್ಟುಕೊಂಡಿರುವ ಅನುಷ್ಠಾನ ಸಮಿತಿ ಅಧ್ಯಕ್ಷರು, ಸದಸ್ಯರು ಕಾರಣ ಎಂದು ದೂರಿದ್ದಾರೆ.

ಈಗ ಗ್ಯಾರಂಟಿಯಲ್ಲಿ ಲೋಪವಾಗಿದೆ ಎಂದು ಹೇಳುತ್ತಿರುವವರು ಕಳೆದ ಮೂರು ವರ್ಷಗಳಿಂದ ಏನು ಮಾಡುತ್ತಿದ್ದರು ಎಂದು ಪ್ರಶ್ನಿಸಿರುವ ರಘು ಅವರು, ಗ್ಯಾರಂಟಿ ಯೋಜನೆಯಡಿ ಹಣ ದುರುಪಯೋಗವಾಗುತ್ತಿದೆ ಎಂಬ ಕಾರಣ ನೀಡಿ, ಫಲಾನುಭವಿಗಳ ಸಂಖ್ಯೆ ಕಡಿಮೆ ಮಾಡಲು ಕಾಂಗ್ರೆಸ್ ಸರ್ಕಾರ ಸಂಚು ರೂಪಿಸಿದೆ ಎಂದು ಆರೋಪಿಸಿದ್ದಾರೆ.

ಹಣ ದುರುಪಯೋಗ ಆಗಿದ್ದರೆ ಅದಕ್ಕೆ ನೇರ ಕಾರಣ ಅದರ ಮೇಲುಸ್ತುವಾರಿ ನೋಡಿಕೊಳ್ಳಲು, ಮೇಲಿಂದ ಮೇಲೆ ಪರಿಶೀಲನೆ ನಡೆಸಲು ನೇಮಿಸಿರುವ ರಾಜ್ಯ, ಜಿಲ್ಲಾ, ತಾಲೂಕು ಅಧ್ಯಕ್ಷರು, ಸದಸ್ಯರೇ ಆಗಿದ್ದಾರೆ. ಹಾಗಿದ್ದರೆ ಇಷ್ಟು ದಿನ ಅವರು ಏನು ಕೆಲಸ ಮಾಡುತಿದ್ದರು. ಕೇವಲ ಸಂಭಾವನೆ ರೂಪದಲ್ಲಿ ಜನರ ತೆರಿಗೆ ನುಂಗಿ ನೀಡು ಕುಡಿಯುತ್ತಿದ್ದರಾ ಎಂದು ಕೇಳಿದ್ದಾರೆ.

ಗ್ಯಾರಂಟಿ ಯೋಜನೆ ಹಣ ದುರುಪಯೋಗಕ್ಕೆ ನೇರವಾಗಿ ಅಧ್ಯಕ್ಷರು-ಸದಸ್ಯರು, ಅವರನ್ನು ನೇಮಿಸಿರುವ ಸರ್ಕಾರವೇ ಕಾರಣ. ಹೀಗಾಗಿ ಪೋಲಾಗಿರುವ ಹಣವನ್ನು ಕರ್ತವ್ಯಲೋಪ ಎಸಗಿರುವವರಿಂದಲೇ ವಸೂಲಿ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಈಗ ಪರಿಷ್ಕರಣೆ ಮಾಡಿದರೆ ವೈಜ್ಞಾನಿಕವಾಗಿ ಮಾಡಬೇಕು. ಯಾರು ಬದುಕಿಲ್ಲವೋ ಅವರ ಹೆಸರನ್ನು ಹೊರಗಿಟ್ಟು, ಹಾಲಿ ಯಾರೆಲ್ಲ ಗ್ಯಾರಂಟಿ ಲಾಭ ಪಡೆಯುತ್ತಿದ್ದಾರೆಯೋ ಅದನ್ನು ಮುಂದುವರಿಸಬೇಕು.

ಎಲ್ಲ ಫಲಾನುಭವುಗಳಿಗೆ ಹೊಸದಾಗಿ ನೋಂದಣಿ ಮಾಡಿಕೊಂಡು, ಪಟ್ಟಿಯಲ್ಲಿ ಮತ್ತೆ ಅವರ ಹೆಸರು ಕಾಣಿಸುವವರೆಗೂ ಹಳೆಯ ಮಾದರಿಯಲ್ಲೇ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಕೇವಲ ನಾಲ್ಕು ಸರ್ಕಾರದ ಅಧೀನದಲ್ಲಿರುವ ಸೈಬರ್ ಸೆಂಟರ್ ಮೂಲಕ ಅರ್ಜಿ ಹಾಕಲು ಸ್ಥಳ ನಿಗದಿ ಮಾಡಿರುವುದರಿಂದ ಜನಸಾಮಾನ್ಯರಿಗೆ ತೊಂದರೆ ಆಗಲಿದೆ.

ಎಲ್ಲಕ್ಕಿಂತ ಮುಖ್ಯವಾಗಿ ದಿನಗಟ್ಟಲೆ ಕಾಯಬೇಕಿದೆ. ಹಾಗಾಗಿ ಎಲ್ಲ ಸೈಬರ್ ಸೆಂಟರ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ನೀಡಬೇಕು, ಅದರ ವೆಚ್ಚವನ್ನು ಸರ್ಕಾರ ಭರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಎಲ್ಲಕ್ಕಿಂತ ಮುಖ್ಯವಾಗಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ನೀಡುವ ಸಂಭಾವನೆಯನ್ನು ಕೂಡಲೇ ನಿಲ್ಲಿಸಿ, ಅನವಶ್ಯಕವಾಗಿ ಕೋಟ್ಯಂತರ ರೂ. ಖರ್ಚಾಗುವುದಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248